ದಿನಾಂಕ: *07.12.2024* ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಶ್ರೀ ಬಿ.ಪಿ.ಆರ್. ವಕೀಲರಿಂದ ಅರ್ಜಿದಾರರ ಪರವಾಗಿ:**

1. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿರುವ ಸಹಿ ನನ್ನದು. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿರುತ್ತದೆ ಮತ್ತು ಸತ್ಯವಾಗಿರುತ್ತದೆ. ಅದನ್ನು ಓದಿ ತಿಳಿದುಕೊಂಡು ಅದಕ್ಕೆ ನನ್ನ ಸಹಿಯನ್ನು ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ತಿಳಿಸಿದ ಕಾರಣಗಳಿಗಾಗಿ ನನ್ನ ಅರ್ಜಿಯನ್ನು ಪುರಸ್ಕರಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

2. ಅರ್ಜಿದಾರರಾದ ನನ್ನ ತಂದೆಯವರು ನನಗೆ ಬರೆದುಕೊಟ್ಟಿರುವ ವಿಶೇಷ ಮೊಕ್ತಿಯಾರು ನಾಮೆಯನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ.1 ಎಂದು,ದಿ: 13-08-2015 ರ ಅಂತಿಮ ಐತೀರ್ಪು ತಿಳುವಳಿಕೆಯ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.**2** ಎಂದು, ಭದ್ರಾ ಮೇಲ್ದಂಡೆ ಯೋಜನೆ ಪ್ಯಾಕೇಜ್-2 ರ ಹಳಿಯೂರು ಗ್ರಾಮದ 74.02 ಎಕರೆ ಪ್ರದೇಶಕ್ಕೆ ಸಂಬಂಧಿಸಿದ ಐತೀರ್ಪಿನ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.**3** ಎಂದು, ದಿ: 06-08-2024 ರಂದು ತರೀಕೆರೆ ಪುರಸಭೆಯ ಮುಖ್ಯಾಧಿಕಾರಿಗಳು ಅರ್ಜಿದಾರರಿಗೆ ನೀಡಿರುವ ದೃಢೀಕರಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.**4** ಎಂದು, ತರೀಕೆರೆ ಮುನ್ಸಿಪಾಲ್ ಪ್ಲಾನಿಂಗ್ ಅಥಾರಿಟಿಯವರು ನೀಡಿರುವ ನಕ್ಷೆಯ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.**5** ಎಂದು ಗುರುತಿಸಲಾಯಿತು.

(ಅರ್ಜಿದಾರರ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿಯ ಮುಂದಿನ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು)

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.